ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 61 ಗ್ರಾಪಂಸಿ 2020 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:06.05.2022.

**ಸುತ್ತೋಲೆ-1**

**ವಿಷಯ** ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಶವಸಂಸ್ಕಾರಕ್ಕೆ ರೂ.10,000/- ಗಳನ್ನು ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ**

1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ:05-04-2022 ರಂದು ಗ್ರಾಮ ಪಂಚಾಯತಿ ನೌಕರರ ಬೇಡಿಕೆಗಳ ಬಗ್ಗೆ ನಡೆದ ಸಭೆಯ ನಡವಳಿಗಳು.

****

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ರಡಿ ಸರ್ಕಾರವು ಆದೇಶದ ಮೂಲಕ ಗ್ರಾಮ ಪಂಚಾಯತಿಗಳ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು ಮತ್ತು ನೇಮಕಾತಿ ವಿಧಾನವನ್ನು ನಿರ್ದಿಷ್ಟಪಡಿಸಬಹುದಾಗಿದೆ. ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ: (2) ರ ಸರ್ಕಾರದ ಅಧಿಸೂಚನೆಯಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ಅನ್ನು ರೂಪಿಸಲಾಗಿದೆ. ಸದರಿ ನಿಯಮಗಳಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 112 ಮತ್ತು 113 ರಂತೆ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವರ್ಗದ ಸ್ವರೂಪ, ನೇಮಕಾತಿ ವಿಧಾನ, ರಜೆ ಸೌಲಭ್ಯ, ಅನುಕಂಪದ ಆಧಾರಿತ ನೇಮಕಾತಿ, ಶಿಸ್ತು ಪ್ರಾಧಿಕಾರ, ಮರಣ ಮತ್ತು ನಿವೃತ್ತಿ ಉಪದಾನ ಮತ್ತು ಇತರೆ ಸೇವಾ ಷರತ್ತುಗಳನ್ನು ನಿರ್ದಿಷ್ಟಪಡಿಸಲಾಗಿದೆ.

ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ 1) ಬಿಲ್‌ಕಲೆಕ್ಟರ್, 2) ಕ್ಲರ್ಕ್, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, 3) ವಾಟರ್ ಆಪರೇಟರ್ 4) ಅಟೆಂಡೆಂಟ್ ಮತ್ತು 5) ಕ್ಲೀನರ್ಸ್ ರವರು ಕಾರ್ಯನಿರ್ವಹಿಸುತ್ತಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 05-04-2022 ರಂದು ಗ್ರಾಮ ಪಂಚಾಯತಿ ನೌಕರರ ಬೇಡಿಕೆಗಳ ಬಗ್ಗೆ ನಡೆದ ಸಭೆಯಲ್ಲಿ ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಶವಸಂಸ್ಕಾರಕ್ಕೆ ರೂ.10.000/- ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಆದೇಶ ಹೊರಡಿಸುವಂತೆ ತೀರ್ಮಾನಿಸಲಾಗಿದೆ.

ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10.000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಕ್ರಮ ಕೈಗೊಳ್ಳುವಂತೆ ಎಲ್ಲಾ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದೆ.

6/5/22

**(ಎಂ.ಎಂ.ರಾಜು)**
ಸರ್ಕಾರದ ಅಧೀನ ಕಾರ್ಯದರ್ಶಿ,(ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6/5/22

**ಇವರಿಗೆ:**

1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆಂಪೇಗೌಡ ರಸ್ತೆ, ಗಾಂಧಿನಗರ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
5. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತ.